## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಮಧ್ಯಾಹ್ನದ ಉಪಹಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಯವರ ಮಾಸಿಕ ಗೌರವ ಸಂಭಾವನೆಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ : 1. 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 96

2. ಮಧ್ಯಾಹ್ನ ಉಪಹಾರ ಯೋಜನೆಯ ಏಕ ಕಡತ ಸಂಖ್ಯೆ: ಎಂ 02/ಅದಾ/ಕ್ಷೀಭಾಯೋ/03-05/08/2017-18.

3. ಸರ್ಕಾರದ ಆದೇಶ ಸಂಖ್ಯೆ: ಇಡಿ 05 ಎಂಎಂಎಸ್ 2016, ದಿನಾಂಕ:21.05.2016.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ 2017-18ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ಜುಲೈ-2017 ರಿಂದ ವಾರದಲ್ಲಿ 5 ದಿನಗಳು ಉಚಿತ ಹಾಲನ್ನು ನೀಡುವುದಾಗಿ ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2) ರ ಜಂಟಿ ನಿರ್ದೇಶಕರು, ಮಧ್ಯಾಹ್ನದ ಉಪಹಾರ ಯೋಜನೆ ಇವರ ಏಕ ಕಡತದಲ್ಲಿ ಮಧ್ಯಾಹ್ನ ಬಿಸಿಯೂಟ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಮತ್ತು ಅಡುಗೆ ಸಹಾಯಕರ ಸೇವೆಯನ್ನೇ ಕ್ಷೀರಭಾಗ್ಯ ಯೋಜನೆಯಡಿ ಹಾಲನ್ನು ಸಿದ್ದಪಡಿಸಲು ಹಾಗೂ ವಿತರಣೆ ಮಾಡಲು ಬಳಸಿಕೊಳ್ಳಲಾಗುತ್ತಿದೆ. ಅವರ ಗೌರವಧನವನ್ನು ಏಪ್ರಿಲ್ 2006 ರಲ್ಲಿ ಪರಿಷ್ಕರಿಸಲಾಗಿರುತ್ತದೆ. 2017-18ನೇ ಸಾಲಿಗೆ ವಾರದಲ್ಲಿ 3 ರಿಂದ 5 ದಿನಗಳಿಗೆ ಹಾಲನ್ನು ನೀಡುವ ಕಾರ್ಯ ವಿಸ್ತರಿಸಿದ್ದು, ಮುಖ್ಯ ಅಡುಗೆಯವರು ಮತ್ತು ಅಡುಗೆ ಸಹಾಯಕರು ಹಾಲನ್ನು ಸಿದ್ದಪಡಿಸಿ ವಿತರಿಸಬೇಕಾಗಿದ್ದು, ಕಾರ್ಯಭಾರ ಹೆಚ್ಚುವುದರಿಂದ ಹಾಗೂ ಒಂದು ವರ್ಷದಿಂದ ಗೌರವಧನವನ್ನು ಪರಿಷ್ಕರಿಸದೇ ಇರುವುದರಿಂದ, ಗೌರವಧನವನ್ನು ರೂ.200/- ಪ್ರತಿ ತಿಂಗಳಿಗೆ ಹೆಚ್ಚಿಸುವಂತೆ ಕೋರಿರುತ್ತಾರೆ. ಇದರಿಂದ ವಾರ್ಷಿಕವಾಗಿ ಹೆಚ್ಚುವರಿಯಾಗಿ ತಗಲುವ ವೆಚ್ಚ ರೂ.24.00 ಕೋಟಿಗಳಾಗುವುದೆಂದು ಅಂದಾಜಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಸರ್ಕಾರದ ಆದೇಶದಲ್ಲಿ ದಿನಾಂಕ:01-04-2016 ರಿಂದ ಜಾರಿಗೆ ಬರುವಂತೆ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಯವರ ಮಾಸಿಕ ಗೌರವ ಸಂಭಾವನೆಯಲ್ಲಿ ತಲಾ ರೂ.300/- ಗಳನ್ನು ಹೆಚ್ಚಿಸಿ ಆದೇಶಿಸಲಾಗಿದೆ. ಪ್ರಸ್ತುತ ಮುಖ್ಯ ಅಡುಗೆಯವರಿಗೆ ಮಾಹೆಯಾನ ರೂ.2,000/- ಹಾಗೂ ಅಡುಗೆ ಸಹಾಯಕರಿಗೆ ಮಾಹೆಯಾನ ರೂ.1,900/- ಗಳ ಗೌರವ ಸಂಭಾವನೆಯನ್ನು ನೀಡಲಾಗುತ್ತಿದೆ.

...2

prs

863

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 35 ಎಂ.ಎಂ.ಎಸ್ 2017, ಬೆಂಗಳೂರು, ದಿನಾಂಕ:11/07/2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಹಾಗೂ ಅಡುಗೆ ಸಹಾಯಕರಿಗೆ ನೀಡಲಾಗುವ ಮಾಸಿಕ ಗೌರವ ಸಂಭಾವನೆಯಲ್ಲಿ ದಿನಾಂಕ:01-07-2017 ರಿಂದ ಜಾರಿಗೆ ಬರುವಂತೆ ತಲಾ **ರೂ.200.00 (ಎರಡು ನೂರು ರೂಪಾಯಿಗಳು ಮಾತ್ರ)** ಗಳನ್ನು ಹೆಚ್ಚಿಸಿ ಆದೇಶಿಸಿದೆ.

ದಿನಾಂಕ:01.07.2017 ರಿಂದ ಅನ್ವಯವಾಗುವಂತೆ ಮುಖ್ಯ ಅಡುಗೆಯವರಿಗೆ ಮಾಸಿಕ ರೂ.2200.00 ಹಾಗೂ ಅಡುಗೆ ಸಹಾಕರಿಗೆ ಮಾಸಿಕ ರೂ.2100.00 ಗೌರವ ಸಂಭಾವನೆಯನ್ನು ಪಾವತಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 458 ವೆಚ್ಚ-8/2017, ದಿನಾಂಕ:27-06-2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

11/7

(ಅನ್ನಪೂರ್ಣ ಪಾವಟೆ)
ಸರ್ಕಾರದ ಉಪಕಾರ್ಯದರ್ಶಿ (ಯೋಜನೆ),
ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು/
ಶಿಕ್ಷಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
5. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
6. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಹಾಲು ಮಹಾ ಮಂಡಳಿ, ಬೆಂಗಳೂರು.
8. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ (ಆಯುಕ್ತರ ಮುಖಾಂತರ)
10. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
11. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.
12. ಕೋ ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು. (ಪ್ರಾಥಮಿಕ & ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು
3. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರು.

prs